

ಬೇಕಿರಲಿಲ್ಲ. ಕಟ್ಟಿಗೆಗಾಗಿ ಮಾರಿ ಹಣ ಮಾಡುವ ಉದ್ದೇಶವೂ ಅವರದಾಗಿರಲಿಲ್ಲ. ಯಾರೋ ನೆಟ್ಟ, ಯಾರದೋ ಇಚ್ಛೆಯಿಂದಾಗಿ ಆ ಸ್ಥಳದಲ್ಲಿ ಬೆಳೆದ, ನಿತ್ಯ ಜೀವನ್ಮುಖಿ ಪ್ರಕೃತಿಗೆ ಆ ಪ್ರದೇಶದಲ್ಲೊಂದು ಹೊಸ ಆಯಾಮ ನೀಡಿದ, ಭೂಮಿ ಬಾನು, ನಾಡು ಕಾಡು, ಹುಲ್ಲು ಹಸಿರು, ಕಲ್ಲು ಮಣ್ಣುಗಳು ಒಂದಾಗಿ ನಲಿಯುವ, ಬೆಟ್ಟ ಕಣಿವೆಗಳು ಒಂದಾಗಿ ಕುಣಿಯುವ ಜಾಗದಲ್ಲಿ ಬಲಿತ, ಯಾರಿಗೆ ಯಾವ ತೊಂದರೆಯನ್ನೂ ಕೊಡದ, ಸಾಧ್ಯ ಆದರೆ ತಂಪು ನೆರಳು, ಶುದ್ಧ ಗಾಳಿ, ಮತ್ತೆ ನಯನ ಮನೋಹರ ದೃಶ್ಯವನ್ನು ಸಹಜವಾಗಿ ಬಿಡಿಸುತ್ತ ಅಸಂಖ್ಯ ಪ್ರವಾಸಿಗರನ್ನು ತನ್ನತ್ತ ಸೆಳೆಯುತ್ತ ಪ್ರಸಿದ್ಧವಾಗಿದ್ದ ಮರವೊಂದು ಅಚಾನಕ್ ಇಲ್ಲದಿದ್ದರೆ ಜಗತ್ತು ಹೇಗೆ ಪ್ರತಿಕ್ರಿಯಿಸಬಹುದು ಎನ್ನುವುದನ್ನು ಆ ಇಬ್ಬರಿಗೆ ನೋಡಬೇಕಿತ್ತು. ಅಷ್ಟೇ. ಬರೀ ಅಷ್ಟೇ. ಒಂದು ಮರವನ್ನು ಕಡಿಯಲು ಅವರಿಗಿದ್ದದ್ದು ಅದೊಂದೇ ಕ್ಷುಲ್ಲಕ ಕಾರಣ, ಪ್ರೇರಣೆ. ಕಾಲ, ಭೂಮಿ, ಜೀವಿ, ಜೀವನ, ಸಂದರ್ಭ ಎಲ್ಲವನ್ನೂ ಒಂದು ಕ್ಷಣಕ್ಕಾದರೂ ಅಪಹಾಸ್ಯ ಮಾಡಲು ಅವರು ಕಂಡುಕೊಂಡ ದಾರಿ, ಪುರಾತನ ಚಾರಿತ್ರಿಕ ಸಿಕಮೋರ್ ಮರವನ್ನು ಕಡಿಯುವುದು. ಮತ್ತೆ ಆ ಮರದ ಬಗ್ಗೆ ಕೇಳಿದವರ, ನೋಡಿದವರ, ಫೋಟೋ ತೆಗೆದವರ, ನೆರಳಲ್ಲಿ ಒಂದು ಗಳಿಗೆ